ಉಪನಿರ್ದೇಶಕರು(ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಾರ್ಯಾಲಯ,
ಸಮಗ್ರ ಶಿಕ್ಷಣ ಕರ್ನಾಟಕ, ಸಾರ್ವಜನಿಕ ಶಿಕ್ಷಣ ಇಲಾಖೆ, ದಾವಣಗೆರೆ ಜಿಲ್ಲೆ, ದಾವಣಗೆರೆ.

# ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ 2019–20ರ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ ಸಭೆ

## --: ಸಭಾ ನಡಾವಳಿ :--

2019–20 ನೇ ಸಾಲಿನ ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ 2019–20ರ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ ಸಭೆಯನ್ನು ದಿನಾಂಕ:05–02–2020 ರಂದು ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು ದಾವಣಗೆರೆ ಜಿಲ್ಲೆ, ದಾವಣಗೆರೆ ಅಧ್ಯಕ್ಷತೆಯಲ್ಲಿ ನಡೆದ ಸಭೆಯು ಉಪನಿರ್ದೇಶಕರು(ಆಡಳಿತ) ಸಾ.ಶಿ.ಇ ದಾವಣಗೆರೆ ಜಿಲ್ಲೆ ಇವರು ಸ್ವಾಗತ ಕೋರುವ ಮೂಲಕ ಪ್ರಾರಂಭವಾಯಿತು,

<u>ಸಭೆಯಲ್ಲಿ ಹಾಜರಿದ್ದವರು:-</u>

1. ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಭವನ, ದಾವಣಗೆರೆ ಜಿಲ್ಲೆ, ದಾವಣಗೆರೆ ಹಾಗೂ ಅಧ್ಯಕ್ಷರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
2. ಉಪನಿರ್ದೇಶಕರು(ಆಡಳಿತ) ಸಾ.ಶಿ.ಇ ದಾವಣಗೆರೆ ಜಿಲ್ಲೆ ಹಾಗೂ ಕಾರ್ಯದರ್ಶಿ ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
3. ಉಪಯೋಜನಾ ಸಮನ್ವಯ ಅಧಿಕಾರಿಗಳು, ಸಮಗ್ರ ಶಿಕ್ಷಣ ಕರ್ನಾಟಕ(ಆರ್.ಎಂ.ಎಸ್.ಎ) ಹಾಗೂ ಸದಸ್ಯರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
4. ಉಪಯೋಜನಾ ಸಮನ್ವಯ ಅಧಿಕಾರಿಗಳು, ಸಮಗ್ರ ಶಿಕ್ಷಣ ಕರ್ನಾಟಕ(ಎಸ್.ಎಸ್.ಎ) ಹಾಗೂ ಸದಸ್ಯರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
5. ಸಹಾಯಕ ಯೋಜನಾ ಸಮನ್ವಯಾಧಿಕಾರಿಗಳು, ಎಸ್.ಎಸ್.ಕೆ ಹಾಗೂ ಜಿಲ್ಲಾ ನೋಡಲ್ ಅಧಿಕಾರಿಗಳು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
6. ಜಿಲ್ಲಾ ಅರಣ್ಯಾಧಿಕಾರಿ, ದಾವಣಗೆರೆ ಸದಸ್ಯರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
7. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ದಾವಣಗೆರೆ, ಸದಸ್ಯರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
8. ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ದಾವಣಗೆರೆ ಸದಸ್ಯರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
9. PEOPLE NGO ಸದಸ್ಯರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
10. AID NGO ಸದಸ್ಯರು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಜಿಲ್ಲಾ ಅನುಷ್ಠಾನ ಮೇಲ್ವಿಚಾರಣಾ ಸಮಿತಿ.
11. ಮುಖ್ಯೋಪಾದ್ಯಾಯರು ಸರ್ಕಾರಿ ಪ್ರೌಢಶಾಲೆ ನಾಗರಸನಹಳ್ಳಿ ದಾವಣಗೆರೆ ದಕ್ಷಿಣ ವಲಯ.
12. ಮುಖ್ಯೋಪಾದ್ಯಾಯರು ಸರ್ಕಾರಿ ಪ್ರೌಢಶಾಲೆ ಕೊಡಗನೂರು ದಾವಣಗೆರೆ ದಕ್ಷಿಣ ವಲಯ.
13. ಮುಖ್ಯೋಪಾದ್ಯಾಯರು ಸೀತಮ್ಮ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗ ದಾವಣಗೆರೆ ದಕ್ಷಿಣ ವಲಯ.
14. ಮುಖ್ಯೋಪಾದ್ಯಾಯರು ಸರ್ಕಾರಿ ಪ್ರೌಢಶಾಲೆ ಟಿ.ಜಿ ಹಳ್ಳಿ, ನ್ಯಾಮತಿ ತಾ॥
15. ಮುಖ್ಯೋಪಾದ್ಯಾಯರು ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕಶಾಲೆ ಅಗರಬನ್ನಿಹಟ್ಟಿ ಚನ್ನಗಿರಿ.

ಸಭೆಯ ಆರಂಭದಲ್ಲಿ ಉಪನಿರ್ದೇಶಕರು(ಆಡಳಿತ) ಇವರು ಪ್ರಾಸ್ತಾವಿಕವಾಗಿ ಮಾತನಾಡಿದರು ನಂತರದಲ್ಲಿ ಜಿಲ್ಲಾ ನೋಡಲ್ ಅಧಿಕಾರಿಗಳು ರಾಷ್ಟ್ರೀಯ ಹಸಿರು ಪಡೆ ಕಾರ್ಯಕ್ರಮ ಇವರು ಸದರಿ ಕಾರ್ಯಕ್ರಮದ ವಿವರ, ಶಾಲೆಗಳಿಗೆ ಅನುದಾನದ ಹಂಚಿಕೆ, ಅನುದಾನ ಬಳಕೆಯ ಮಾರ್ಗಸೂಚಿ, ದಾಖಲೀಕರಣ ಕುರಿತಂತೆ ಹಾಗೂ ಈಗಾಗಲೇ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕನ್ನು ಹೊರತುಪಡಿಸಿ 434 ಶಾಲೆಗಳಲ್ಲಿ 120 ಇಕೋ-ಕ್ಲಬ್ ಶಾಲೆಗಳ ನೋಡಲ್ ಶಿಕ್ಷಕರ ತರಬೇತಿ ನೀಡಿರುವ ಕುರಿತು ಮತ್ತು ಎಂಪ್ರಿ ಸಂಸ್ಥೆಯ ಪಾತ್ರದ ಕುರಿತು ಮಾಹಿತಿ ನೀಡಿದರು.



ಸಭೆಯ ಅಧ್ಯಕ್ಷತೆ ವಹಿಸಿದ್ದ ಮಾನ್ಯ ಜಿಲ್ಲಾಧಿಕಾರಿಗಳು ಉಳಿದ ಶಾಲೆಗಳ ನೋಡಲ್ ಶಿಕ್ಷಕರಿಗೆ ಶೀಘ್ರದಲ್ಲಿ ತರಬೇತಿ ನೀಡುವಂತೆ ತಿಳಿಸಿದರು ಹಾಗೂ ತರಬೇತಿಯಲ್ಲಿ ಪರಿಸರ ಸಂರಕ್ಷಣೆ, ತ್ಯಾಜ್ಯ ವಿಲೇವಾರಿ, ಪ್ಲಾಸ್ಟಿಕ್ ನಿಷೇಧ, ಹವಾಮಾನ ಬದಲಾವಣೆ, ಜಾಗತಿಕ ತಾಪಮಾನ ಮುಂತಾದ ವಿಷಯಗಳೊಂದಿಗೆ ನೀರಿನ ಸಂರಕ್ಷಣೆ ಕುರಿತು ಕೂಡ ಮಾಹಿತಿ ನೀಡುವಂತೆ ತಿಳಿಸಿದರು.

ಕ್ರಮ : ಸದರಿ ಕಾರ್ಯಕ್ರಮದ ಆಯೋಜಕರು



ಸಭೆಯಲ್ಲಿ ಹಾಜರಿದ್ದ 5 ಶಾಲೆಗಳ ನೋಡಲ್ ಶಿಕ್ಷಕರು ಇಕೋ–ಕ್ಲಬ್ ಅಡಿಯಲ್ಲಿ ತಮ್ಮ ಶಾಲೆಗಳಲ್ಲಿ ಅನುಷ್ಟಾನಗೊಳಿಸಿರುವ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ವಿಶೇಷವಾಗಿ ಪರಿಸರ ಸ್ವಚ್ಚತೆ ಕುರಿತು ಜಾಗೃತಿ ಅಭಿಯಾನ, ಶೌಚಾಲಯ ಬಳಕೆ, ಶಾಲೆ/ಸಮುದಾಯ ಸ್ವಚ್ಚತೆ, ನೀರಿನ ಸಂರಕ್ಷಣೆ, ಶಾಲಾ ಕೈತೋಟದಲ್ಲಿ ಅಕ್ಷರ ದಾಸೋಹಕ್ಕೆ ಬೇಕಾಗಿರುವ ತರಕಾರಿಗಳನ್ನು ಬೆಳೆಯುತ್ತಿರುವ ಕುರಿತು ಮಾಹಿತಿ ಹಂಚಿಕೊಂಡರು. ಈ ಕುರಿತು ಮಾನ್ಯ ಜಿಲ್ಲಾಧಿಕಾರಿಗಳು ಸದರಿ ಶಿಕ್ಷಕರಿಗೆ ಅಭಿನಂದನೆಗಳನ್ನು ತಿಳಿಸುತ್ತಾ, ಇನ್ನೂ ಮುಂದುವರೆದು ತಮ್ಮ ತಮ್ಮ ಶಾಲೆಗಳಲ್ಲಿ ಹುಣಸೆ ಮರ, ನಿಂಬೆಗಿಡ, ನುಗ್ಗಿಕಾಯಿಗಿಡ, ಕರಬೇವು ಸಸಿಗಳನ್ನು ಬೆಳೆಸುವಂತೆ ಸಲಹೆ ನೀಡಿದರು.

ಕ್ರಮ : ಇಕೋ–ಕ್ಲಬ್ ಶಾಲೆಗಳನ್ನು ಒಳಗೊಂಡಂತೆ ಎಲ್ಲಾ ಶಾಲೆಗಳ ಮುಖ್ಯೋಪಾದ್ಯಾಯರು.

ಮಾನ್ಯ ಜಿಲ್ಲಾಧಿಕಾರಿಗಳು ಶಾಲೆಯಲ್ಲಿ ಎಲ್ಲಾ ಶಿಕ್ಷಕರು ಮಕ್ಕಳನ್ನು ಕುಟುಂಬದ ಆಸ್ತಿ ಮಾಡುವುದರ ಜೊತೆಗೆ ಸಮುದಾಯದ ಆಸ್ತಿಯನ್ನಾಗಿ ಆ ಮೂಲಕ ದೇಶದ ಆಸ್ತಿಯನ್ನಾಗಿ ಮಾಡುವಂತೆ ಸಲಹೆ ನೀಡಿದರು. ಮುಂದುವರೆದು, ಶಾಲೆಯಲ್ಲಿ ಮಕ್ಕಳು ಈ ಪರಿಸರ ಸಂರಕ್ಷಣೆ ಬಗ್ಗೆ ಸಾಕಷ್ಟು ಮಾಹಿತಿಯನ್ನು ಪಡೆದುಕೊಂಡಿದ್ದು, ಅದರ ಪ್ರಯೋಜವನ್ನು ತಮ್ಮ ಕುಟುಂಬಗಳಲ್ಲಿ ಹಾಗೂ ಸಮುದಾಯದಲ್ಲಿ ಹಂಚಿಕೊಂಡಿದ್ದಾರೆಯೇ? ಅದರ ಉಪಯೋಗ ಸಮಾಜಕ್ಕೆ ತಲುಪಿದೆಯೇ ಎಂಬುದರ ಕುರಿತು ಮಾಹಿತಿ ಸಂಗ್ರಹಿಸುವಂತೆ ಸೂಚಿಸಿದರು.

ಕ್ರಮ ; ಉಪನಿರ್ದೇಶಕರು(ಆಡಳಿತ) ಇವರ ಮಾರ್ಗದರ್ಶನದಲ್ಲಿ ಇಕೋ–ಕ್ಲಬ್ ಶಾಲೆಗಳ ನೋಡಲ್ ಶಿಕ್ಷಕರು.

ಸಭೆಯ ಅಂತಿಮ ಭಾಗದಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು ಇತ್ತೀಚೆಗೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಹೊಸಕೆರೆ ಶಾಲೆಗೆ ಜಿಲ್ಲೆಯ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭೇಟಿ ನೀಡಿದ ಸಂದರ್ಭವನ್ನು ನೆನೆಪಿಸಿಕೊಳ್ಳುತ್ತಾ ಅಲ್ಲಿನ ಓರ್ವ ವಿದ್ಯಾರ್ಥಿ ಜೀವನದಲ್ಲಿ ಅತ್ಯುನ್ನತ ಸಾಧನೆ ಮಾಡುವ ಕುರಿತು ಅಭಿಪ್ರಾಯ

ಹಂಚಿಕೊಂಡಿದ್ದನ್ನು ತಿಳಿಸುತ್ತಾ, ಮಕ್ಕಳಲ್ಲಿ "ಕನಸು ಬಿತ್ತುವ ಕೆಲಸ, ರಾಷ್ಟ್ರ ಕಟ್ಟುವ ಕೆಲಸ" ಕಾರ್ಯಕ್ರಮಕ್ಕೆ ಚಾಲನೆ ನೀಡಿರುವ ಕುರಿತು ಮಾಹಿತಿ ನೀಡಿದರು ಅಂತೆಯೇ, ಸದರಿ ಕಾರ್ಯಕ್ರಮವನ್ನು ಶಾಲೆಗಳಲ್ಲಿ ಶಿಕ್ಷಕರು ಮುಂದುವರೆಸುವಂತೆ ಸಲಹೆ ನೀಡಿದರು. ಒಟ್ಟಾರೆ ಸದರಿ ಕಾರ್ಯಕ್ರಮವು ಒಂದು ಅತ್ಯುತ್ತಮ ಕಾರ್ಯಕ್ರಮವಾಗಿದ್ದು, ಎಲ್ಲರೂ ಇದರಲ್ಲಿ ಭಾಗಿಗಳಾಗಿ ಯಶಸ್ವಿಗೊಳಿಸೋಣ ಎಂದು ಕರೆ ನೀಡಿದರು.

ಉಪಯೋಜನಾ ಸಮನ್ವಯಾಧಿಕಾರಿಗಳು(ಆರ್.ಎಂ.ಎಸ್.ಎ) ಇವರು ಸಭೆಯಲ್ಲಿದ್ದ ಎಲ್ಲರಿಗೂ ವಂದನೆಗಳನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಉಪನಿರ್ದೇಶಕರು(ಆಡಳಿತ) ಹಾಗೂ ಪದನಿಮಿತ್ತ
ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳು,
ಸಮಗ್ರ ಶಿಕ್ಷಣ ಕರ್ನಾಟಕ, ಸಾ.ಶಿ.ಇಲಾಖೆ, ದಾವಣಗೆರೆ

ಪ್ರತಿಯನ್ನು:-

1. ಮಾನ್ಯ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಭವನ, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರಿಗೆ ಗೌರವಪೂರ್ವಕವಾಗಿ ವಂದನೆಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಕಚೇರಿ ಪ್ರತಿ.